ಶ್ರೀ ಎ. ಲಕ್ಷ್ಮೀಸಾಗರ್(ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).--ಮಾನ್ಯ ಅಧ್ಯಕ್ಷರೆ, ೧೯೮೬ರ ಕರ್ನಾಟಕ ಧನವಿನಿಯೋಗ ಸಂಖ್ಯೆ (೨) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರಿತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).--ಮಾನ್ಯ ಅಧ್ಯಕ್ಷರೆ, ಸಂಖ್ಯೆ (೨) ಧನವಿನಿಯೋಗ ವಿಧೇಯಕದ ಮೇಲೆ ಈಗಾಗಲೆ ದೀರ್ಘವಾದಂತಹ ಚರ್ಚೆ ಆಗಿದೆ. ಆದಕ್ಕೆ ದೀರ್ಘವಾದಂತಹ ಉತ್ತರವನ್ನೂ ಕೂಡ ಮಾನ್ಯ ಮುಖ್ಯಮಂತ್ರಿಗಳವರು ಕೊಟ್ಟಿದ್ದಾರೆ. ಆದುದರಿಂದ ನಾನು ಅವರಲ್ಲಿ ವಿನಂತಿ ಮಾಡಿಕೊಳ್ಳುವುದೇನೆಂದರೆ ಈ ಸಂಖ್ಯೆ (೨) ವಿಧೇಯಕಕ್ಕೆ ದಯವಿಟ್ಟು ತಮ್ಮ ಒಪ್ಪಿಗೆಯನ್ನು ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು.--ಪ್ರಸ್ತಾವ ಏನೆಂದರೆ ''೧೯೮೬ರ ಕರ್ನಾಟಕ ಧನವಿನಿಯೋಗ ಸಂಖ್ಯೆ (೨) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು.

ಖಂಡ 2 ಮತ್ತು 3

ಅಧ್ಯಕ್ಷರು.--''ಖಂಡ ೨ ಮತ್ತು ೩ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ ೨ ಮತ್ತು ೩ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ ೧ ಇತ್ಯಾದಿ

ಅಧ್ಯಕ್ಷರು.--ಪ್ರಸ್ತಾವ ಏನೆಂದರೆ, ''ಮೊದಲನೆ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.''

ಪ್ರಸ್ತಾವವನ್ನು ಅಂಗೀಕರಿಸಲಾಯಿತು

(ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).--ಮಾನ್ಯ ಅಧ್ಯಕ್ಷರೆ, ೧೯೮೬ರ ಧನವಿನಿಯೋಗ ಸಂಖ್ಯೆ (೨) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.--ಪ್ರಸ್ತಾವ ಏನೆಂದರೆ ೧೯೮೬ರ ಕರ್ನಾಟಕ ಧನ ವಿನಿಯೋಗ ಸಂಖ್ಯೆ (೨) ವಿಧೇಯಕವನ್ನು ಅಂಗೀಕರಿಸಬೇಕು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮುಸೂದೆಗೆ ಒಪ್ಪಿಗೆ ನೀಡಲಾಯಿತು

೧೯೮೬ರ ಕರ್ನಾಟಕ ಧನ ವಿನಿಯೋಗ ಸಂಖ್ಯೆ (೩) ವಿಧೇಯಕ

ಪರ್ಯಾಲೋಚನ ಪ್ರಸ್ತಾವ

ಶ್ರೀ ಎ. ಲಕ್ಷ್ಮೀಸಾಗರ್ (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—

ಮಾನ್ಯ ಅಧ್ಯಕ್ಷರೆ, ೧೯೮೬ರ ಕರ್ನಾಟಕ ಧನವಿನಿಯೋಗ ಸಂಖ್ಯೆ (೩) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೆ, ಸಂಖ್ಯೆ (೩) ಧನವಿನಿಯೋಗ ವಿಧೇಯಕದ ಮೇಲೆ ಈಗಾಗಲೇ ದೀರ್ಘವಾದಂತಹ ಚರ್ಚೆ ಆಗಿದೆ. ಅದಕ್ಕೆ ದೀರ್ಘವಾದಂತಹ ಉತ್ತರವನ್ನೂ ಕೂಡ ಮಾನ್ಯ ಮುಖ್ಯಮಂತ್ರಿಗಳವರು ಕೊಟ್ಟಿದ್ದಾರೆ. ಆದುದರಿಂದ ನಾನು ಅವರಲ್ಲಿ ವಿನಂತಿ ಮಾಡಿಕೊಳ್ಳುವುದೇನೆಂದರೆ ಈ ಸಂಖ್ಯೆ (೩) ವಿಧೇಯಕಕ್ಕೆ ದಯವಿಟ್ಟು ತಮ್ಮ ಒಪ್ಪಿಗೆಯನ್ನು ಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, ''೧೯೮೬ರ ಕರ್ನಾಟಕ ಧನವಿನಿಯೋಗ ಸಂಖ್ಯೆ (೩)ವಿಧೇಯಕವನ್ನು ಪರಾಲೋಚಿಸುವುದು.''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು.—'ಖಂಡ ೨ ಮತ್ತು ೩ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ'.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ ೨ ಮತ್ತು ೩ ಎರಡೂ ಸೇರಿದಂತೆ ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು.)

ಖಂಡ 1 ಇತ್ಯಾದಿ

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ, ''ಮೊದಲನೆ ಖಂಡ, ದೀರ್ಘ ಶೀರ್ಷಿಕೆ ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವನ್ನು ಅಂಗೀಕರಿಸಲಾಯಿತು

(ಮೊದಲನೇ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು).

ಪ್ರಸ್ತಾವದ ಅಂಗೀಕಾರ

ಶ್ರೀ ಎ. ಲಕ್ಷ್ಮೀಸಾಗರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು).—ಮಾನ್ಯ ಅಧ್ಯಕ್ಷರೇ, ೧೯೮೬ರ ಧನವಿನಿಯೋಗ ಸಂಖ್ಯೆ (೩) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೮೬ರ ಕರ್ನಾಟಕ ಧನವಿನಿಯೋಗ ಸಂಖ್ಯೆ (೩) ವಿಧೇಯಕವನ್ನು ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಶ್ರೀ ಎಂ. ವೀರಪ್ಪಮೊಯ್ಲಿ.—ಮಾನ್ಯ ಅಧ್ಯಕ್ಷರೇ, ಫೈನಾನ್ಸ್ ಬಿಲ್ಲುಗಳನ್ನು ಬೇಕಾದರೆ ನಾವು ಪಾಸ್ ಮಾಡಿಕೊಡೋಣ. ಆದರೆ ಇನ್ನು ಉಳಿದಂಥ ಬೇರೆ ಬಿಲ್ಲುಗಳ ಬಗ್ಗೆ ಮಾನ್ಯ ಸದಸ್ಯರು ಮಾತನಾಡುವವರಿದ್ದಾರೆ. ಆದ್ದರಿಂದ ಇವತ್ತು ಬೇಡ. ಈಗ ನಾವು ಆತುರ ಆತುರವಾಗಿ ಪಾಸ್ ಮಾಡಿಕೊಂಡು ಹೋದರೆ ನಾಳೆ ಯಾರಾದರೂ ಹೈಕೋರ್ಟಿಗೆ ಹೋಗಿ ಚಾಲೆಂಜ್ ಮಾಡಿದರೆ ಗತಿ ಏನು? ಅದರಲ್ಲಿ ಕೆಲವು ಶಬ್ದಗಳನ್ನು ಬದಲಾವಣೆ ಮಾಡುವಂತಹ ಅವಶ್ಯಕತೆ ಇರುತ್ತದೆ. ಈ ಧನವಿನಿಯೋಗ ಮಸೂದೆಗಳನ್ನು ಪಾಸ್ ಮಾಡಿ ಕೊಟ್ಟಂತೆ ಆ ಮಸೂದೆಗಳನ್ನು ಪಾಸ್ ಮಾಡುವುದಕ್ಕೆ ಆಗುವುದಿಲ್ಲ. ಆದ್ದರಿಂದ ದಯವಿಟ್ಟು ಮತ್ತೊಂದು ದಿನ ತೆಗೆದುಕೊಳ್ಳಿ. ಈಗಾಗಲೇ ಸಾಕಷ್ಟು ಸಮಯವಾಗಿದೆ.